**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರವಾಗಿ ಶ್ರೀ ವಿ.ವಿ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈಗ ನನಗೆ ತೋರಿಸಲಾದ ನಿ.ಪಿ.-1 ಮತ್ತು 2 ರ ದಾಖಲೆಗಳನ್ನು ನಾನೇ ಬರೆದಿದ್ದೇನೆ. ನಿ.ಪಿ.-2 ರ ದಾಖಲೆಯಲ್ಲಿ ನನ್ನ ಸಹಿ ಇದೆ. ಅದನ್ನು ಈಗ ನಿ.ಪಿ.-2(ಬಿ) ಎಂದು ಗುರುತಿಸಲಾಯಿತು. ನಿ.ಪಿ.-2 ರ ದಾಖಲೆಯಲ್ಲಿ ರಮೇಶ್ ರವರ ಸಹಿ ಇದ್ದು ಅದನ್ನು ಈಗ ನೋಡಿ ಗುರುತಿಸುತ್ತಿದ್ದೇನೆ. ಅದನ್ನು ಈಗ ನಿಪಿ-2(ಸಿ) ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಪ್ರತಿವಾದಿಯ ಸಹಿಗಳು ಮತ್ತು ಹೆಬ್ಬೆಟ್ಟಿನ ಗುರುತು ಇದೆ. ಸಾಕ್ಷಿ ನೋಡಿ ಗುರುತಿಸಿದ ಸಹಿಗಳನ್ನು ಈಗಾಗಲೆ ನಿ.ಪಿ.-1(ಎ) ಮತ್ತು 2(ಎ) ಎಂದು ಗುರುತಿಸಲಾಗಿದೆ.

**ಪಾಟೀ ಸವಾಲುಃ ಪ್ರತಿವಾದಿಯ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**